# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** **ದಿನಾಂಕ: 18.12.2019**

**ಬಿಬಿಎಂಪಿ ವ್ಯಾಪ್ತಿಯಲ್ಲಿ ನಾಮಫಲಕ ತೆರವು ಕಾರ್ಯಾಚರಣೆ ಹಮ್ಮಿಕೊಂಡಿರುವ ಬಗ್ಗೆ:**









ಪಾಲಿಕೆ ಆರೋಗ್ಯಾಧಿಕಾರಿಗಳ ನೇತೃತ್ವದಲ್ಲಿ ಇಂದು ಕನ್ನಡ ಭಾಷೆಯನ್ನು ಅಗ್ರಸ್ಥಾನದಲ್ಲಿ(ಶೇ.60) ಬಳಸದೇ ಇರುವ ಉದ್ದಿಮೆಗಳ ಮೇಲೆ ಪಾಲಿಕೆ ಸಿಬ್ಬಂದಿ ತೆರಳಿ ನಾಮಫಲಕ ತೆರವು ಕಾರ್ಯಾಚರಣೆ ನಡೆಸಿರುತ್ತಾರೆ. ಈ ಪೈಕಿ ವಿಜಯನಗರ, ಬಸವನಗುಡಿ, ಚಿಕ್ಕಪೇಟೆ, ಕೋರಮಂಗಲ, ಜಯನಗರ, ಪದ್ಮನಾಭನಗರ ವ್ಯಾಪ್ತಿಯಲ್ಲಿ ನೋಟಿಸ್ ಜಾರಿಗೊಳಿಸಿದ್ದ 586 ಮಳಿಗೆಗಳ ಪೈಕಿ 207 ಮಳಿಗೆಗಳ ಮೇಲೆ ದಾಳಿ ನಡೆಸಿ ನಾಮಫಲಕಗಳನ್ನು ತೆರವುಗೊಳಿಸಲಾಗಿದ್ದು, ಕನ್ನಡ ಭಾಷೆಯ ನಾಮಫಲಕಗಳನ್ನು ಅಳವಡಿಸುವಂತೆ ಸೂಚನೆ ನೀಡಲಾಗಿರುತ್ತದೆ.

ಜಯನಗರ ಶಾಪಿಂಗ್ ಕಾಂಪ್ಲೆಕ್ಸ್ ಸುತ್ತಮುತ್ತಲಿನ ಪ್ರದೇಶದಲ್ಲಿ ನೋಟಿಸ್ ನೀಡಿದ್ದ 118 ಉದ್ದಿಮೆಗಳ ಪೈಕಿ 58 ಮಳಿಗೆಗಳ ಮೇಲೆ ಆರೋಗ್ಯಾಧಿಕಾರಿಗಳ ತಂಡವು ಮಾರ್ಷಲ್‌ಗಳ ಸಹಕಾರದಲ್ಲಿ ದಾಳಿ ನಡೆಸಿ ನಾಮಫಲಕಗಳನ್ನು ತೆರವುಗೊಳಿಸಲಾಗಿದ್ದು, ವಾರದೊಳಗಾಗಿ ಶೇ.60 ರಷ್ಟು ಕನ್ನಡ ಭಾಷೆಯುಳ್ಳ ನಾಮಫಲಕಗಳನ್ನು ಅಳವಡಿಸಿಕೊಳ್ಳುವಂತೆ ಸೂಚನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಆರೋಗ್ಯಾಧಿಕಾರಿಗಳ ತಂಡಗಳನ್ನು ರಚಿಸಿಕೊಂಡು ವಾರ್ಡ್‌ವಾರು ನಾಮಫಲಕ ತೆರವು ಕಾರ್ಯಾಚರಣೆ ನಡೆಸಲಾಗುವುದು ಎಂದು ಆರೋಗ್ಯಾಧಿಕಾರಿಯಾದ ಭಾಗ್ಯಲಕ್ಷ್ಮೀ ರವರು ತಿಳಿಸಿದರು.

ವಿಜಯನಗರ ಮುಖ್ಯರಸ್ತೆ ವ್ಯಾಪ್ತಿಯಲ್ಲಿ ನೋಟೀಸ್ ನೀಡಿದ್ದ 133 ಉದ್ದಿಮೆಗಳ ಪೈಕಿ 17 ಉದ್ದಿಮೆಗಳ ನಾಮಫಲಕಗಳನ್ನು ತೆರವುಗೊಳಿಸಲಾಗಿದೆ. ಬಸವನಗುಡಿ ತ್ಯಾಗರಾಜನಗರ 2ನೇ ಮುಖ್ಯರಸ್ತೆ ವ್ಯಾಪ್ತಿಯಲ್ಲಿ ನೋಟಿಸ್ ನೀಡಿದ್ದ 70 ಉದ್ದಿಮೆಗಳ ಪೈಕಿ 32 ಉದ್ದಿಮೆಗಳ ನಾಮಫಲಕಗಳನ್ನು ತೆರವುಗೊಳಿಸಲಾಗಿದೆ. ಪದ್ಮನಾಭನಗರ, ಹೊಸಕೆರೆಹಳ್ಳಿ ದ್ವಾರಕನಗರ 7ನೇ ಮುಖ್ಯರಸ್ತೆ(ಪಿ.ಇ.ಎಸ್ ಕಾಲೇಜು ಹತ್ತಿರ) ನೋಟೀಸ್ ನೀಡಿದ್ದ 55 ಉದ್ದಿಮೆಗಳ ಪೈಕಿ 30 ಉದ್ದಿಮೆಗಳ ನಾಮಫಲಕಗಳನ್ನು ತೆರವುಗೊಳಿಸಲಾಗಿದೆ. ಬಿಟಿಎಂ ಲೇಔಟ್, ಕೋರಮಂಗಲ 5 ಮತ್ತು 6ನೇ ಬ್ಲಾಕ್, 5ನೇ ಅಡ್ಡರಸ್ತೆಯಲ್ಲಿ ನೋಟೀಸ್ ನೀಡಿದ್ದ 60 ಉದ್ದಿಮೆಗಳ ಪೈಕಿ 18 ಉದ್ದಿಮೆಗಳ ನಾಮಫಲಕಗಳನ್ನು ತೆರವುಗೊಳಿಸಲಾಗಿದೆ. ಚಿಕ್ಕಪೇಟೆಯ ಜೆ.ಸಿ.ರಸ್ತೆ, ಮಿನರ್ವ ವೃತ್ತದಿಂದ ಟೌನ್ ಹಾಲ್‌ನವರೆಗೆ ನೋಟೀಸ್ ನೀಡಿದ್ದ 150 ಉದ್ದಿಮೆಗಳ ಪೈಕಿ 52 ಉದ್ದಿಮೆಗಳ ನಾಮಫಲಕಗಳನ್ನು ತೆರವುಗೊಳಿಸಲಾಗಿದೆ.

ಪಾಲಿಕೆ ವ್ಯಾಪ್ತಿಯಲ್ಲಿ ಕನ್ನಡ ಭಾಷೆಯ ನಾಮಫಲಕ ಅಳವಡಿಸುವ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದ್ದು, ಹಂತ ಹಂತವಾಗಿ ಕನ್ನಡ ಭಾಷೆ ಅಳವಡಿಸದ ಮಳಿಗೆಗಳ ಮೇಲೆ ದಾಳಿ ನಡೆಸಿ ಶೇ.60 ರಷ್ಟು ಕನ್ನಡ ಭಾಷೆಯುಳ್ಳ ನಾಮಫಲಕಗಳನ್ನು ಅಳವಡಿಸಲು ಸೂಚನೆ ನೀಡಲಾಗುತ್ತದೆ.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**